ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ವಿಜಯಪುರ

ಜಿಲ್ಲಾ ವಾರ್ತಾಧಿಕಾರಿಗಳ ಕಚೇರಿ, ವಿಜಯಪುರ – 586101, ದೂ. 08352-250150, ಫ್ಯಾಕ್ಸ್ 08352-250150

Email: asddipr.bij-ka@gov.in /dipobijapur@gmail.com, Facebook : varthabhavanbijapur

ದಿನಾಂಕ: 21-12-2016

### ರಾಜ್ಯದಲ್ಲಿ ಭೀಕರ ಬರ ಪರಿಸ್ಥಿತಿ : ಕೇಂದ್ರದ ನೆರವಿನ ನಿರೀಕ್ಷೆ

# ಬರದಿಂದ ಬಾಧಿತ ಪ್ರತಿ ತಾಲೂಕಿಗೆ 60 ಲಕ್ಷ ರೂ. ಬಿಡುಗಡೆ

-ಮುಖ್ಯಮಂತ್ರಿ ಸಿದ್ಧರಾಮಯ್ಯ



**ವಿಜಯಪುರ: ಡಿ.21** – ರಾಜ್ಯದಲ್ಲಿ ಭೀಕರ ಬರಗಾಲ ಎದುರಾಗಿದ್ದು, ಕುಡಿಯುವ ನೀರು, ಜಾನುವಾರುಗಳಿಗೆ ಮೇವು ನಿರ್ವಹಣೆಗಾಗಿ ಬರ ಪೀಡಿತ ಪ್ರತಿ ತಾಲೂಕಿಗೆ 60 ಲಕ್ಷ ರೂ.ಗಳನ್ನು ಬಿಡುಗಡೆ ಮಾಡಲಾಗಿದೆ. ಯಾವುದೇ ಕಾರಣಕ್ಕೂ ಬರಪೀಡಿತ ಜನರು ತೊಂದರೆಗೊಳಗಾದಂತೆ ರಾಜ್ಯ ಸರ್ಕಾರ ಎಲ್ಲ ಕ್ರಮ ಕೈಗೊಳ್ಳಲಿದೆ ಎಂದು ಮುಖ್ಯಮಂತ್ರಿ ಸಿದ್ಧರಾಮಯ್ಯ ಹೇಳಿದರು.

ಬುಧವಾರ ಬಸವನಬಾಗೇವಾಡಿ ವಿಧಾನಸಭಾ ಕ್ಷೇತ್ರದ ಅಂದಾಜು 500 ಕೋಟಿ ರೂ.ಗಳಿಗೂ ಅಧಿಕ ವೆಚ್ಚದಲ್ಲಿ ಕೈಗೊಳ್ಳಲಾದ ಸರ್ಕಾರದ ವಿವಿಧ ಅಭಿವೃದ್ಧಿ ಕಾರ್ಯಕ್ರಮಗಳಿಗೆ ಬಸವನಬಾಗೇವಾಡಿ ನಗರದ ಬಸವೇಶ್ವರ ಸರ್ಕಾರಿ ಪದವಿಪೂರ್ವ ಕಾಲೇಜ್ ಆವರಣದಲ್ಲಿ ಭೂಮಿಪೂಜೆ ಹಾಗೂ ಉದ್ಘಾಟನೆ ನೆರವೇರಿಸಿ, ಮಾತನಾಡಿದ ಅವರು, ಮಳೆಯ ಅಭಾವದಿಂದ ರಾಜ್ಯದಲ್ಲಿ 25 ಸಾವಿರ ಕೋಟಿ ರೂ.ಯಷ್ಟು ಬೆಳೆ ನಷ್ಟವಾಗಿದೆ. ಕೃಷ್ಣಾ-ನಾರಾಯಣಪೂರ ಜಲಾಶಯ ಹೊರತುಪಡಿಸಿ ಕಾವೇರಿಕೊಳ್ಳದ ಯಾವ ಜಲಾಶಯಗಳಲ್ಲೂ ನೀರಿಲ್ಲ. ರಾಜ್ಯದ 139 ತಾಲೂಕುಗಳು ಬರ ಪೀಡಿತ ಪ್ರದೇಶಗಳೆಂದು ಘೋಷಿಸಲಾಗಿದೆ. ಪರಿಹಾರಕ್ಕಾಗಿ ಕೇಂದ್ರ ಸರ್ಕಾರಕ್ಕೆ 4207 ಕೋಟಿ ರೂ.ಗಳ ಮನವಿ ಸಲ್ಲಿಸಲಾಗಿದೆ. ಹಾಗೂ 386 ಕೋಟಿ ರೂ.ಗಳನ್ನು ನೆರೆ ಪರಿಹಾರಕ್ಕಾಗಿ ಬೇಡಿಕೆ ಸಲ್ಲಿಸಲಾಗಿದೆ. ಕೇಂದ್ರ ಸರ್ಕಾರದಿಂದ ಈವರೆಗೆ ಯಾವುದೇ ಹಣ ಬಿಡುಗಡೆಯಾಗಿಲ್ಲ ಎಂದು ಹೇಳಿದರು.

ಕಳೆದ ವರ್ಷ ಕೇಂದ್ರ ಸರ್ಕಾರದಿಂದ ಬರ ಪರಿಹಾರವಾಗಿ 1546 ಕೋಟಿ ರೂ.ಗಳ ಬೆಳೆ ಪರಿಹಾರ ಬಿಡುಗಡೆಯಾಗಿತ್ತು. ಈ ಹಣವನ್ನು ಎಲ್ಲ ರೈತರ ಬ್ಯಾಂಕ್ ಖಾತೆಗಳಿಗೆ ಜಮಾ ಮಾಡಲಾಗಿದೆ. ಈವರ್ಷ ಬೆಳೆ ಪರಿಹಾರ

ಪಡೆಯುವ ಅರ್ಹ ರೈತರ ಪಟ್ಟಿಯನ್ನು ಸಿದ್ಧ ಮಾಡಿಕೊಳ್ಳಲಾಗಿದೆ. ಕೇಂದ್ರದಿಂದ ಅನುದಾನದ ಬಿಡುಗಡೆಗೊಂಡ ತಕ್ಷಣ ರೈತರ ಬ್ಯಾಂಕ್ ಖಾತೆಗೆ ಹಣ ಜಮಾ ಮಾಡಲಾಗುವುದು ಎಂದು ಹೇಳಿದರು.

ಕೇಂದ್ರ ಸರ್ಕಾರ ರಾಜ್ಯದ ಬರ ಪರಿಸ್ಥಿತಿಗೆ ಸ್ಪಂದಿಸದಿದ್ದರೂ ಯಾವುದೇ ಕಾರಣಕ್ಕೂ ರಾಜ್ಯದ ಜನತೆ ಬರಗಾಲದಿಂದ ಬಳಲದಂತೆ ರಾಜ್ಯ ಸರ್ಕಾರ ಎಲ್ಲ ನೆರವು ಒದಗಿಸಲಿದೆ. ಕುಡಿಯುವ ನೀರು, ಜಾನುವಾರುಗಳಿಗೆ ಮೇವು, ಜನರಿಗೆ ಉದ್ಯೋಗ ನೀಡಲು ಕ್ರಮ ಕೈಗೊಳ್ಳಲಾಗುವುದು. ಈಗಾಗಲೇ ಬರಪೀಡಿತ 139 ತಾಲೂಕುಗಳಿಗೆ ತಲಾ 60 ಲಕ್ಷ ರೂ.ದಂತೆ ಬಿಡುಗಡೆ ಮಾಡಲಾಗಿದೆ. ಬರ ರಹಿತ ತಾಲೂಕುಗಳಿಗೆ ತಲಾ 40ಲಕ್ಷ ರೂ.ಗಳಂತೆ ಬಿಡುಗಡೆ ಮಾಡಲಾಗಿದೆ. ರಾಜ್ಯದ ಬರಪೀಡಿತ ಪ್ರದೇಶಗಳಿಗೆ 324 ಕೋಟಿ ರೂ.ಗಳನ್ನು ರಾಜ್ಯದ ಎಲ್ಲ ಜಿಲ್ಲೆಗಳಿಗೂ ಒದಗಿಸಲಾಗಿದೆ ಎಂದು ಹೇಳಿದರು.

**ಬೆಳೆಸಾಲ ಮನ್ನಾಕ್ಕೆ ಸಿದ್ಧ :** ಕೇಂದ್ರ ಸರ್ಕಾರ ಬೆಳೆಸಾಲ ಮನ್ನಾ ಮಾಡಲು ಘೋಷಿಸಿದರೆ ರಾಜ್ಯ ಸರ್ಕಾರವು ಸಾಲ ಮನ್ನಾ ಮಾಡಲು ಸಿದ್ಧವಾಗಿದೆ. ಈ ಕುರಿತಂತೆ ಈಗಾಗಲೇ ಪ್ರಧಾನಮಂತ್ರಿಗಳಿಗೆ ಮನವಿ ಮಾಡಿಕೊಳ್ಳಲಾಗಿದೆ. ಹಾಗೂ ರಾಜ್ಯದ ಸಂಸತ್ ಸದಸ್ಯರ ಸಭೆಯಲ್ಲಿಯೂ ಸಹ ಈ ಕುರಿತಂತೆ ಮನವಿ ಮಾಡಿಕೊಳ್ಳಲಾಗಿದೆ. ಕೇಂದ್ರ ಸರ್ಕಾರ ವ್ಯಾಪ್ತಿಯಲ್ಲಿ ಬರುವ ವಾಣಿಜ್ಯ ಮತ್ತು ಖಾಸಗಿ ಬ್ಯಾಂಕುಗಳಲ್ಲಿ ರೈತರು ಮಾಡಿದ ಸಾಲ 35 ಸಾವಿರ ಕೋಟಿ ರೂ.ಇದೆ. ರಾಜ್ಯ ಸರ್ಕಾರದ ವ್ಯಾಪ್ತಿಯಲ್ಲಿ ಬರುವ ಸಹಕಾರಿ ಬ್ಯಾಂಕ್‌ಗಳಲ್ಲಿ ರೈತರು ಮಾಡಿದ ಸಾಲ ಕೇವಲ 10 ಸಾವಿರ ಕೋಟಿ ರೂ.ಇದೆ. ವಾಣಿಜ್ಯ ಬ್ಯಾಂಕುಗಳಲ್ಲಿ ರೈತರು ಮಾಡಿದ ಶೇ.50ರಷ್ಟು ಸಾಲವನ್ನು ಕೇಂದ್ರ ಸರ್ಕಾರ ಮನ್ನಾ ಮಾಡಿದರೆ, ರಾಜ್ಯ ಸರ್ಕಾರವು ಶೇ.50ರಷ್ಟು ಪಾಲನ್ನು ನೀಡಿ ಸಾಲ ಮನ್ನಾ ಮಾಡಲು ಸಿದ್ಧವಿದೆ. ಶೇಕಡ ನೂರಕ್ಕೆ ನೂರರಷ್ಟು ರೈತರಿಗೆ ಅನುಕೂಲ ಮಾಡಲು ಕೇಂದ್ರ ಸರ್ಕಾರ ಮನಸ್ಸು ಮಾಡಬೇಕು. ಪ್ರಧಾನ ಮಂತ್ರಿಗಳು ರೈತರು ಮಾಡಿದ ವಾಣಿಜ್ಯ ಬ್ಯಾಂಕ್ ಮತ್ತು ಖಾಸಗಿ ಬ್ಯಾಂಕ್‌ಗಳ ಸಾಲ ಮನ್ನಾ ಮಾಡಿದರೆ ಎಲ್ಲ ರೈತರಿಗೆ ಅನುಕೂಲವಾಗಲಿದೆ ಎಂದು ಹೇಳಿದರು.

ನಾನು ಬಸವಣ್ಣನವರ ಅನುಯಾಯಿ. ಜಾತಿರಹಿತ, ವರ್ಗರಹಿತ ಸಮಾಜ ನಿರ್ಮಾಣ ಮಾಡುವ ಕನಸು ಕಂಡ ಬಸವಣ್ಣನವರ ಮಾರ್ಗದಲ್ಲಿ ನಮ್ಮ ಸರ್ಕಾರ ನಡೆಯುತ್ತಿದೆ. ಕಾಯಕ-ದಾಸೋಹ ಬಸವಣ್ಣನವರು ಪ್ರತಿಪಾದಿಸಿದ ತತ್ವಗಳು. ಕಾಯಕ ಎಂದರೆ ಸಂಪತ್ತಿನ ಉತ್ಪಾದನೆ. ಈ ಸಂಪತ್ತಿನ ಉತ್ಪಾದನೆಯಲ್ಲಿ ಎಲ್ಲ ವರ್ಗ, ಜಾತಿಯವರು ಭಾಗಿಯಾಗಬೇಕು. ದಾಸೋಹ ಎಂದರೆ ಉತ್ಪಾದನೆಯಾದ ಸಂಪತ್ತನ್ನು ಎಲ್ಲರೂ ಹಂಚಿಕೊಳ್ಳಬೇಕು. ಇದೇ ಸಮಾನತೆ ಸಮಾಜದ ತಳಹದಿ. ಈ ತಳಹದಿಯ ಮೇಲೆ ರಾಜ್ಯ ಸರ್ಕಾರ ಸಾಮಾಜಿಕ ನ್ಯಾಯಕ್ಕೆ ನಮ್ಮ ಸರ್ಕಾರ ಬದ್ಧವಾಗಿದೆ. ಎಲ್ಲ ಜಾತಿ, ಎಲ್ಲ ಧರ್ಮ, ಎಲ್ಲ ವರ್ಗದ ಜನರ ಸೇವೆಗಾಗಿ ಸರ್ಕಾರ ಹಲವು ಯೋಜನೆಗಳನ್ನು ಜಾರಿಗೊಳಿಸಿದೆ. ಹಸಿವು ಮುಕ್ತ ಕರ್ನಾಟಕ ನಿರ್ಮಾಣ ಮಾಡುವ ದೃಷ್ಟಿಯಲ್ಲಿ ಅಧಿಕಾರ ವಹಿಸಿಕೊಂಡ ದಿನದಿಂದೇ ಅನ್ನಭಾಗ್ಯ ಯೋಜನೆಯನ್ನು ಜಾರಿಗೊಳಿಸಿದ್ದೇವೆ. ಇದರಿಂದ 1.8 ಕೋಟಿ ಜನರು ನೆರವು ಪಡೆಯುತ್ತಿದ್ದಾರೆ. ಶಾಲಾ ಮಕ್ಕಳ ಅಪೌಷ್ಠಿಕತೆ ನಿವಾರಿಸಲು ಜಾರಿಗೊಳಿಸಿದ ಕ್ಷೀರಭಾಗ್ಯ ಯೋಜನೆಯಿಂದ 1.5 ಕೋಟಿ ಮಕ್ಕಳು ನೆರವು ಪಡೆಯುತ್ತಿದ್ದಾರೆ. ಒಂದು ಲಕ್ಷ ಜನರಿಗೆ ಕೃಷಿ ಹೊಂಡ ನಿರ್ಮಿಸಿಕೊಟ್ಟಿದ್ದೇವೆ. ಒಂದು ಲಕ್ಷ ಹಿಂದುಳಿದ ವರ್ಗದ ವಿದ್ಯಾರ್ಥಿಗಳು ಶಿಕ್ಷಣವನ್ನು ಮುಂದುವರೆಸಲು ಪ್ರತಿವರ್ಷ ಪ್ರತಿ ವಿದ್ಯಾರ್ಥಿಗೆ ತಲಾ 15 ಸಾವಿರ ರೂ.ಗಳನ್ನು ನೀಡುತ್ತಿದ್ದೇವೆ. ಹಾಲು ಉತ್ಪಾದಕ ರೈತರಿಗೆ ಒಂದು ಲೀಟರ್ ಹಾಲಿಗೆ ಶೇ.5 ರೂ. ಪ್ರೋತ್ಸಾಹ ಧನ, 3ಲಕ್ಷ ರೂವರೆಗೆ ಬಡ್ಡಿರಹಿತ ಸಾಲ, 4 ರಿಂದ 10 ಲಕ್ಷ ರೂ.ವರೆಗೆ

ಶೇ.3ರಷ್ಟ ಬಡ್ಡಿ ದರದಲ್ಲಿ ಸಾಲ ಸೇರಿದಂತೆ ಮೈತ್ರಿ, ಮನಸ್ಸಿನಿ, ವಿದ್ಯಾಸಿರಿಯಂತಹ ಹಲವು ಯೋಜನೆಗಳು ಸಮಾಜದ ಎಲ್ಲ ವರ್ಗಗಳ ಏಳಿಗೆಗೆ ಸಹಕಾರಿಯಾಗಿವೆ ಎಂದು ಹೇಳಿದರು.

ಅಂಬೇಡ್ಕರ್ ಕನಸು ಕಂಡಂತೆ ಸಮ ಸಮಾಜ ನಿರ್ಮಾಣ ಮಾಡಬೇಕೆಂಬ ಕನಸಿನಂತೆ ಸಮಾನತೆ, ಸಾಮಾಜಿಕ ನ್ಯಾಯ ತರಬೇಕಾದರೆ ನಮ್ಮ ಸಂಪತ್ತು ಸಮಾನವಾಗಿ ಹಂಚಿಕೆಯಾಗಬೇಕೆಂಬ ನಿಯಮದಂತೆ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗದ ಜನರ ಏಳಿಗೆಗೆ ಅನುದಾನ ವೆಚ್ಚ ಮಾಡಲು ಕಾಯ್ದೆಯನ್ನು ರೂಪಿಸಿ ಈ ವರ್ಷ 19542 ಕೋಟಿ ರೂ.ಗಳನ್ನು ವೆಚ್ಚ ಮಾಡುತ್ತಿದ್ದೇವೆ ಎಂದು ಹೇಳಿದರು.

**ನೋಟು ರದ್ಧತಿ ರೈತರಿಗೆ ತೊಂದರೆ ಬೇಡ :** ಸಾವಿರ-ಐದನೂರು ರೂ.ಗಳ ಹಳೆಯ ನೋಟು ರದ್ಧತಿಗೆ ನಮ್ಮದು ವಿರೋಧವಿಲ್ಲ. ಕಪ್ಪು ಹಣಕ್ಕೆ ಕಡಿವಾಣ ಹಾಕಿ. ಆದರೆ ಬಡವರ ನಿದ್ದೆ ಕೆಡಿಸಬೇಡಿ. ರೈತರಿಗೆ ತೊಂದರೆ ಕೊಡಬೇಡಿ. 2367 ಸಾವಿರ ಕೋಟಿ ರೂ.ಗಳನ್ನು ಅಮಾನ್ಯ ಮಾಡಿದ್ದೀರಿ. ಈ ಪ್ರಮಾಣದ ನೋಟುಗಳನ್ನು ಮುದ್ರಿಸಲು ಹತ್ತು ತಿಂಗಳು ಬೇಕಾಗುತ್ತದೆ. ಪೂರ್ವಸಿದ್ಧತೆಯಿಲ್ಲದೇ ನೋಟು ರದ್ದುಪಡಿಸಿರುವುದರಿಂದ ಸಾಮಾನ್ಯ ಜನರು ತೊಂದರೆ ಅನುಭವಿಸುತ್ತಿದ್ದಾರೆ. ಹದಿನೈದುವರೆ ಸಾವಿರ ಲಕ್ಷ ಕೋಟಿ ರೂ. ಚಲಾವಣೆಯಲ್ಲಿತ್ತು. ಈ ನೋಟು ವಾಪಸ್ಸು ಮಾಡಿದರೆ ಪರ್ಯಾಯ ವ್ಯವಸ್ಥೆಯಿಲ್ಲ. ಕಾನೂನುಬದ್ಧ ಹಣವನ್ನು ಬ್ಯಾಂಕಿನಿಂದ ತೆಗೆಯಲು ರೈತರಿಗೆ, ಸಾಮಾನ್ಯರಿಗೆ ತೊಂದರೆಯಾಗುತ್ತಿದೆ. ಸಹಕಾರಿ ಬ್ಯಾಂಕ್‌ಗಳಿಗೆ ನೋಟು ಅಮಾನ್ಯದಿಂದ ಸಾಲ ತುಂಬಲು ತೊಂದರೆಯಾಗಿದೆ ಎಂಬ ಮನವಿಗಳು ಬಂದಿವೆ. ಈ ಕುರಿತಂತೆ ಕೇಂದ್ರಕ್ಕೆ ಮೂರು ಪತ್ರಗಳನ್ನು ಬರೆದಿದ್ದೇನೆ. ಮತ್ತೊಮ್ಮೆ ತಮ್ಮ ತೊಂದರೆಗಳನ್ನು ನಿವೇದಿಸಿಕೊಂಡು ಮನವಿ ಮಾಡುತ್ತೇನೆ ಎಂದು ಹೇಳಿದರು.

ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಸಚಿವ ಎಚ್.ಕೆ.ಪಾಟೀಲ ಅವರು ಮಾತನಾಡಿ, 2018ರೊಳಗೆ ಕರ್ನಾಟಕ ಬಯಲು ಬಹಿರ್ದೆಸೆ ಮುಕ್ತ ರಾಜ್ಯವಾಗಿ ಘೋಷಿಸಲು ರಾಜ್ಯ ಸರ್ಕಾರ ಶೌಚಾಲಯ ನಿರ್ಮಾಣಕ್ಕೆ ಆದ್ಯತೆ ನೀಡಿದೆ. ಗ್ರಾಮೀಣರಿಗೆ ಶುದ್ಧ ಕುಡಿಯುವ ನೀರನ್ನು ಒದಗಿಸಬೇಕು. ಅಂಬಾನಿಯಂತಹ ಉದ್ಯಮಿಗಳು, ಐಶ್ವರ್ಯ ರೈಅಂತಹ ಚಲನಚಿತ್ರ ನಟಿಯರು ಕುಡಿಯುವ ಶುದ್ಧ ನೀರನ್ನು ನಮ್ಮ ಗ್ರಾಮೀಣ ಜನರು ಕುಡಿಯಬೇಕೆಂದು ನಮ್ಮ ಸರ್ಕಾರದ ಕನಸಾಗಿದೆ. ಈ ನಿಟ್ಟಿನಲ್ಲಿ ರಾಜ್ಯದಲ್ಲಿ 8500 ಶುದ್ಧ ನೀರಿನ ಘಟಕಗಳನ್ನು ಸ್ಥಾಪಿಸಲಾಗಿದೆ. 1.50 ಕೋಟಿ ಜನರಿಗೆ ಶುದ್ಧ ನೀರು ಒದಗಿಸಲಾಗಿದೆ. ಅಶಕ್ತರು, ಅಸಹಾಯಕರಿಗೆ ಮಾಶಾಸನ, ರೈತರ ಜಮೀನು ಖಾತೆಗಳಿಗೆ ಅಲೆದಾಡುವುದನ್ನು ತಪ್ಪಿಸಲು ಅದಾಲತ್‌ಗಳ ಮೂಲಕ ಕೋಟ್ಯಾಂತರ ಜನರಿಗೆ ಅನುಕೂಲ ಮಾಡಿಕೊಡಲಾಗಿದೆ ಎಂದು ಹೇಳಿದರು.

ಪೌರಾಡಳಿತ ಸಚಿವ ಈಶ್ವರ ಖಂಡ್ರೆ ಅವರು ಮಾತನಾಡಿ, ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಿಗೆ ಅನುಕೂಲ ಮಾಡಿಕೊಡಲು 2585 ಕೋಟಿ ರೂ.ಗಳನ್ನು ಒದಗಿಸಲಾಗಿದೆ. 265 ನಗರ ಸ್ಥಳೀಯ ಸಂಸ್ಥೆಗಳಿಗೆ ವಿವಿಧ ಮೂಲ ಸೌಕರ್ಯ ಕಲ್ಪಿಸಲು ಕ್ರಮ ಕೈಗೊಳ್ಳಲಾಗಿದೆ ಎಂದು ಹೇಳಿದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಶಾಸಕ ಶಿವಾನಂದ ಪಾಟೀಲ ಅವರು ಮಾತನಾಡಿ, ಬಸವನಬಾಗೇವಾಡಿಗೆ 24/7 ಕುಡಿಯುವ ನೀರಿನ ಯೋಜನೆಯನ್ನು ಮಂಜೂರು ಮಾಡಿಸಬೇಕು. ಅಂದಾಜು 70 ಕೋಟಿ ರೂ. ವೆಚ್ಚದಲ್ಲಿ

ನಿರ್ಮಿಸುತ್ತಿರುವ ಮೆಘಾ ಮಾರ್ಕೆಟ್‌ಗೆ ರಾಜ್ಯ ಸರ್ಕಾರ 10 ಕೋಟಿ ರೂ. ಬಿಡುಗಡೆ ಮಾಡಿದ್ದು, ಉಳಿದ ಅನುದಾನವನ್ನು ನಗರಾಭಿವೃದ್ಧಿ ಅನುದಾನದಲ್ಲಿ ಒದಗಿಸಿಕೊಡಬೇಕು. ಕೂಡಲಸಂಗಮ ಪ್ರಾಧಿಕಾರದಿಂದ ಪ್ರತ್ಯೇಕಿಸಿ ಬಸವನಬಾಗೇವಾಡಿಗೆ ಪ್ರತ್ಯೇಕ ಅಭಿವೃದ್ಧಿ ಪ್ರಾಧಿಕಾರ ರಚನೆಯಾಗಬೇಕೆಂದು ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದರು.

ಸಮಾರಂಭದಲ್ಲಿ ಜಿಲ್ಲಾ ಪಂಚಾಯತ್ ಅಧ್ಯಕ್ಷೆ ನೀಲಮ್ಮ ಮೇಟಿ, ಶಾಸಕರಾದ ಯಶವಂತರಾಯಗೌಡ ಪಾಟೀಲ, ವಿಧಾನ ಪರಿಷತ್ ಸದಸ್ಯ ಅರುಣ ಶಹಾಪುರ, ಮಾಜಿ ಶಾಸಕರಾದ ಶಿವಪುತ್ರಪ್ಪ ದೇಸಾಯಿ, ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಮೊಹ್ಮದ ಮೊಹಸೀನ್, ಜಿಲ್ಲಾಧಿಕಾರಿ ಕೆ.ಬಿ.ಶಿವಕುಮಾರ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಎಂ.ಸುಂದರೇಶಬಾಬು ಇತರರು ಉಪಸ್ಥಿತರಿದ್ದರು.

## ರಾಜ್ಯದ 225 ವಿಧಾನಸಭಾ ಕ್ಷೇತ್ರಗಳ ಸಮಾನ ಅಭಿವೃದ್ಧಿ ಕಾರ್ಯ

## ಮುದ್ದೇಬಿಹಾಳ ಕ್ಷೇತ್ರದ ನೀರಾವರಿಗೆ ಯೋಜನೆಗಳು ನನ್ನ ಅವಧಿಯಲ್ಲಿಯೇ ಪೂರ್ಣ

**–ಮುಖ್ಯಮಂತ್ರಿ ಸಿದ್ಧರಾಮಯ್ಯ**



**ವಿಜಯಪುರ: ಡಿ.21**–ಪ್ರಣಾಳಿಕೆಯಲ್ಲಿ ಘೋಷಣೆ ಮಾಡಿದಂತೆ 165 ಭರವಸೆಗಳ ಪೈಕಿ 125 ಭರವಸೆಗಳನ್ನು ಈಡೇರಿಸಿದ್ದೇವೆ. ಮುಂದಿನ ಒಂದೂವರೆ ವರ್ಷದಲ್ಲಿ ಎಲ್ಲ ಭರವಸೆಗಳನ್ನು ಈಡೇರಿಸಲಾಗುವುದು. ಮುದ್ದೇಬಿಹಾಳ–ಬಸವನಬಾಗೇವಾಡಿ ಮಾದರಿಯಲ್ಲಿ ರಾಜ್ಯದ 225 ವಿಧಾನಸಭಾ ಕ್ಷೇತ್ರಗಳಲ್ಲಿ ಇದೇ ಪ್ರಮಾಣದಲ್ಲಿ ಅಭಿವೃದ್ಧಿ ಕಾರ್ಯಗಳು ನಡೆಯುತ್ತಿದ್ದು, ಎಲ್ಲ ಕ್ಷೇತ್ರಗಳ ಸಮಾನ ಅಭಿವೃದ್ಧಿಗೆ ಅನುದಾನ ಒದಗಿಸಲಾಗಿದೆ ಎಂದು ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರು ಹೇಳಿದರು.

ಬುಧವಾರ ಮುದ್ದೇಬಿಹಾಳ ವಿಧಾನಸಭಾ ಕ್ಷೇತ್ರದಲ್ಲಿ ಐದನೂರು ಕೋಟಿ ರೂ.ಗಳ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಮುದ್ದೇಬಿಹಾಳದ ವಿ.ಬಿ.ಸಿ. ಪ್ರೌಢಶಾಲಾ ಆವರಣದಲ್ಲಿ ಭೂಮಿಪೂಜೆ ಹಾಗೂ ಉದ್ಘಾಟನೆ ನೆರವೇರಿಸಿ ಮಾತನಾಡಿದ ಅವರು,ನಮ್ಮ ಸರ್ಕಾರ ಪ್ರಜಾಪ್ರಭುತ್ವ,ಸಾಮಾಜಿಕ ನ್ಯಾಯಕ್ಕೆ ಬದ್ಧವಾಗಿದೆ ಎಂದು ಹೇಳಿದರು.

ರಾಜ್ಯದ ಕಾವೇರಿ ಮತ್ತು ಕೃಷ್ಣಾ ಜಲಾನಯನ ಭಾಗದ ನೀರಾವರಿ ಯೋಜನೆಗಳಿಗೆ ಹೆಚ್ಚಿನ ವೇಗ ನೀಡಿದ್ದೇವೆ. ಈ ಯೋಜನೆಗಳನ್ನು ಮುಗಿಸಲು ಒಂದು ಲಕ್ಷ ಕೋಟಿ ರೂ.ಗಳ ಅನುದಾನ ಅವಶ್ಯಕತೆ ಇದೆ. ಪ್ರಣಾಳಿಕೆಯಲ್ಲಿ

ಘೋಷಿಸಿದಂತೆ ನೀರಾವರಿ ಯೋಜನೆಗಳಿಗೆ ಪ್ರತಿ ವರ್ಷ ಹತ್ತು ಸಾವಿರ ಕೋಟಿ ರೂ.ಗಳನ್ನು ನೀಡುವುದಾಗಿ ತಿಳಿಸಲಾಗಿತ್ತು. ಕಳೆದ ಮೂರುವರೆ ವರ್ಷಗಳಲ್ಲಿ ನಲವತ್ತು ಸಾವಿರ ಕೋಟಿ ರೂ.ಗಳನ್ನು ಬಿಡುಗಡೆ ಮಾಡಿದ್ದೇವೆ. ಮುಂದಿನ ಐದು ವರ್ಷದೊಳಗೆ ಅರವತ್ತು ಸಾವಿರ ಕೋಟಿ ರೂ.ಗಳನ್ನು ನೀರಾವರಿಗೆ ನೀಡಲಿದ್ದೇವೆ ಎಂದು ಹೇಳಿದರು.

ವಿಜಯಪುರ ಜಿಲ್ಲೆಯಲ್ಲಿ ಕೃಷ್ಣಾ ಮೇಲ್ದಂಡೆ ಯೋಜನೆಯ ಮೂರನೇ ಹಂತದಲ್ಲಿ ಹತ್ತು ನೀರಾವರಿ ಯೋಜನೆಗಳನ್ನು ಕೈಗೊಂಡಿದ್ದೇವೆ. ಹದಿಮೂರುವರೆ ಸಾವಿರ ಕೋಟಿ ರೂ.ಗಳ ನೀರಾವರಿ ಯೋಜನೆಯ ಕಾಮಗಾರಿಗಳು ಪ್ರಗತಿಯಲ್ಲಿವೆ. ಹಾಗೂ 184 ಕೆರೆಗಳನ್ನು ತುಂಬಿಸಲಾಗುವುದು. ಜಿಲ್ಲೆಯ ಎಲ್ಲ ಕೆರೆಗಳನ್ನು ತುಂಬಿಸಲಾಗುವುದೆಂದು ಹೇಳಿದರು.

ಮುದ್ದೇಬಿಹಾಳ ತಾಲೂಕಿನ ರೈತರಿಗೆ ಅನುಕೂಲವಾಗಲು ಪೀರಾಪುರ, ಬೂದಿಹಾಳ ಹಾಗೂ ನಾಗರಬೆಟ್ಟ ಯೋಜನೆಗಳಿಗೆ ಶೀಘ್ರವೇ ಟೆಂಡರ್ ಕರೆದು ಆರ್ಥಿಕ ಅನುಮೋದನೆ ಸಹ ನೀಡಲಿದ್ದೇವೆ. ನಮ್ಮ ಅವಧಿಯಲ್ಲಿಯೇ ಈ ಯೋಜನೆಗಳನ್ನು ಪೂರ್ಣಗೊಳಿಸಲಾಗುವುದು ಎಂದು ಹೇಳಿದರು.

**ತೊಗರಿ ಕೇಂದ್ರ :** ಶಾಸಕರ ಬೇಡಿಕೆಯಂತೆ ಮುದ್ದೇಬಿಹಾಳ ತಾಲೂಕಿಗೆ ತೊಗರಿ ಖರೀದಿ ಕೇಂದ್ರವನ್ನು ಮಂಜೂರು ಮಾಡಲಾಗುವುದು. ತೊಗರಿ ಸೇರಿದಂತೆ ಈರುಳ್ಳಿ, ಅಡಕೆ, ತೆಂಗಿನಕಾಯಿ, ಕೊಬ್ಬರಿಗೆ ಬೆಂಬಲ ಬೆಲೆಯಡಿ ಖರೀದಿ ಮೂಲಕ ರೈತರಿಗೆ ನೆರವು ಒದಗಿಸಲಾಗಿದೆ. ರೈತರ ಸಂಕಷ್ಟಗಳಿಗೆ ಸರ್ಕಾರ ಸದಾ ಸಿದ್ಧವಿದೆ. ಸಾಲಬಾಧೆಯಿಂದ ಆತ್ಮಹತ್ಯೆ ಮಾಡಿಕೊಂಡ ರೈತ ಕುಟುಂಬಗಳಿಗೆ ತಲಾ 5ಲಕ್ಷ ರೂ. ಪರಿಹಾರ ಜೊತೆಗೆ ಆ ಕುಟುಂಬಗಳ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಲು ಖಾಸಗಿ ಸಂಸ್ಥೆಗಳಲ್ಲಿ ಪ್ರವೇಶಾವಕಾಶ ಕಲ್ಪಿಸುವುದು. ಪ್ರತಿತಿಂಗಳು ಎರಡೂವರೆ ಸಾವಿರ ರೂ.ಗಳ ಮಾಶಾಸನ, ಆರೋಗ್ಯ ಸೇರಿದಂತೆ ಸರ್ಕಾರದ ವಿವಿಧ ಸೌಲಭ್ಯಗಳನ್ನು ಈ ಕುಟುಂಬಗಳಿಗೆ ಕಲ್ಪಿಸಲು ಸರ್ಕಾರ ಕ್ರಮ ಕೈಗೊಂಡಿದೆ ಎಂದು ಹೇಳಿದರು.

ಗ್ರಾಮೀಣಾಭಿವೃದ್ಧಿ ಸಚಿವ ಎಚ್.ಕೆ.ಪಾಟೀಲ ಅವರು ಮಾತನಾಡಿ, ಈ ದಿನ ಮುದ್ದೇಬಿಹಾಳ ತಾಲೂಕಿಗೆ ಭಾಗ್ಯದ ಬಾಗಿಲು ತೆರೆಯುವ ದಿನವಾಗಿದೆ. ಒಂದು ಕ್ಷೇತ್ರಕ್ಕೆ 500 ಕೋಟಿ ರೂ.ಯಷ್ಟು ಅಭಿವೃದ್ಧಿ ಕಾರ್ಯಕ್ರಮಗಳ ಉದ್ಘಾಟನೆ ಹಾಗೂ ಶಂಕುಸ್ಥಾಪನೆ ನೆರವೇರಿಸಿರುವುದು ಸ್ಥಳೀಯ ಶಾಸಕರ ಕ್ರೀಯಾಶೀಲತೆ ಹಾಗೂ ಜನಪರ ಕಾಳಜಿಗೆ ಸಾಕ್ಷಿಯಾಗಿದೆ ಎಂದು ಹೇಳಿದರು.

ಮುಖ್ಯಮಂತ್ರಿಗಳಾಗಿ ಸಿದ್ಧರಾಮಯ್ಯ ಅವರು ರಾಜ್ಯದ ನಾಯಕತ್ವ ವಹಿಸಿಕೊಂಡ ಮೇಲೆ ರಾಜ್ಯದ ಅಭಿವೃದ್ಧಿಯ ನಕ್ಷೆಯಲ್ಲಿ ಬದಲಾವಣೆಯಾಗಿದೆ. ಅಭಿವೃದ್ಧಿ ಕಾರ್ಯಕ್ರಮಗಳ ಜೊತೆಗೆ, ಸಾಮಾನ್ಯ ಜನರ ಬದುಕಿನಲ್ಲಿ ಬದಲಾವಣೆ ತರುವ ಕೆಲಸವಾಗಿದೆ. ಮಹಿಳೆಯರು, ರೈತ ಮಹಿಳೆಯರ ಜೀವನ ಮಟ್ಟ ಸುಧಾರಣೆಗೆ ಶೌಚಾಲಯಗಳ ನಿರ್ಮಾಣ, ಶುದ್ಧ ಕುಡಿಯುವ ನೀರಿನ ಯೋಜನೆಗಳ ಮೂಲಕ ನಗರವಾಸಿಗಳಂತೆ ಗ್ರಾಮೀಣ ಜನತೆಯು ಉತ್ತಮ ಬದುಕು ಕಟ್ಟಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಕೇವಲ ಜನರ ಬಗ್ಗೆ ಚಿಂತನೆ ಮಾಡದೇ, ದನಕರುಗಳ ಬಗ್ಗೆ ಚಿಂತನೆ ಮಾಡಿ, ನಮ್ಮ ಸರ್ಕಾರ ಕುರಿ-ದನದ ದೊಡ್ಡಿಗಳನ್ನು ನಿರ್ಮಾಣ ಮಾಡಲು ಅವಕಾಶವನ್ನು ಕಲ್ಪಿಸಿದೆ ಎಂದು ಹೇಳಿದರು.

ಜಲಸಂಪನ್ಮೂಲ ಸಚಿವ ಎಂ.ಬಿ.ಪಾಟೀಲ ಅವರು ಮಾತನಾಡಿ, ಜಿಲ್ಲೆಯಲ್ಲಿ ಹದಿನೈದುವರೆ ಲಕ್ಷ ಎಕರೆ ಪ್ರದೇಶವನ್ನು ನೀರಾವರಿಗೊಳಪಡಿಸುವ ಹತ್ತು ನೀರಾವರಿ ಯೋಜನೆಗಳನ್ನು ಹದಿಮೂರುವರೆ ಸಾವಿರ ಕೋಟಿ ರೂ.ಗಳ ವೆಚ್ಚದಲ್ಲಿ ಕೈಗೊಳ್ಳಲಾಗಿದೆ. 183 ಕೆರೆಗಳನ್ನು ತುಂಬಿಸುವ ಯೋಜನೆಯನ್ನು ಹಾಕಿಕೊಳ್ಳಲಾಗಿದೆ. ಜಿಲ್ಲಾ ಪಂಚಾಯತ್ ವ್ಯಾಪ್ತಿಗೆ ಬರುವ ಕೆರೆಗಳನ್ನು ತುಂಬಿಸಲು ಯೋಜಿಸಲಾಗಿದ್ದು, ಈ ಕೆರೆಗಳನ್ನು ತುಂಬಿಸಲು ಗ್ರಾಮೀಣಾಭಿವೃದ್ಧಿಯಿಂದ ಅನುದಾನದ ಅವಶ್ಯಕತೆ ಇದೆ ಎಂದು ಹೇಳಿದರು.

ಪೌರಾಡಳಿತ ಸಚಿವ ಈಶ್ವರ ಖಂಡ್ರೆ ಅವರು ಮಾತನಾಡಿ, ನಲವತ್ತು ಕೋಟಿ ರೂ.ವೆಚ್ಚದಲ್ಲಿ ಮುದ್ದೇಬಿಹಾಳ ಒಳಚರಂಡಿ ಕಾಮಗಾರಿ ನಡೆಯುತ್ತಿದ್ದು, ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಿಗೆ ಅನುಕೂಲ ಮಾಡಿಕೊಡಲು 2585 ಕೋಟಿ ರೂ.ಗಳನ್ನು ಒದಗಿಸಲಾಗಿದೆ. 265 ನಗರ ಸ್ಥಳೀಯ ಸಂಸ್ಥೆಗಳಿಗೆ ವಿವಿಧ ಮೂಲ ಸೌಕರ್ಯ ಕಲ್ಪಿಸಲು ಕ್ರಮ ಕೈಗೊಳ್ಳಲಾಗಿದೆ. ಪೌರ ಕಾರ್ಮಿಕರಿಗೆ ವಸತಿ ಸೌಕರ್ಯ, ವೇತನ ಹೆಚ್ಚಳ ಮಾಡಲಾಗಿದೆ ಎಂದು ಹೇಳಿದರು.

ಸಮಾರಂಭದ ಅಧ್ಯಕ್ಷೆ ವಹಿಸಿದ್ದ ಸರ್ಕಾರ ನವದೆಹಲಿ ವಿಶೇಷ ಪ್ರತಿನಿಧಿ ಮುದ್ದೇಬಿಹಾಳ ಕ್ಷೇತ್ರದ ಶಾಸಕ ಸಿ.ಎಸ್.ನಾಡಗೌಡ ಅವರು ಮಾತನಾಡಿ, ಎರಡು ನೀರಾವರಿ ಯೋಜನೆಗಳಿಗಾಗಿ ತ್ಯಾಗ ಮಾಡಿದ ಮುದ್ದೇಬಿಹಾಳ ತಾಲೂಕಿನ ಜನತೆ ನೀರಾವರಿಯಿಂದ ವಂಚಿತವಾಗಿದ್ದು, ಪೀರಾಪುರ, ಬೂದಿಹಾಳ ಹಾಗೂ ನಾಗರಬೆಟ್ಟ ನೀರಾವರಿ ಯೋಜನೆಗಳನ್ನು ಜಾರಿಗೊಳಿಸಬೇಕು. ಎಎಲ್‌ಬಿಸಿ ಕಾಲುವೆ ಜಾಲವನ್ನು ಮರುಜೀವಗೊಳಿಸಬೇಕು. ಉಪ ಕಾಲುವೆಗಳನ್ನು ಪುನಶ್ಚೇತನಗೊಳಿಸುವ ಕಾರ್ಯ ಕೈಗೊಳ್ಳಬೇಕೆಂದು ಮನವಿ ಮಾಡಿಕೊಂಡರು.

**ಪರಿಹಾರ ವಿತರಣೆ :** ಆತ್ಮಹತ್ಯೆ ಮಾಡಿಕೊಂಡ ರೈತ ನಾಮದೇವ ಅವರ ಪತ್ನಿ ಕೊಡಗನೂರಿನ ನೀಲಮ್ಮ ಅವರಿಗೆ 5ಲಕ್ಷ ರೂ. ಪರಿಹಾರವನ್ನು ಮುಖ್ಯಮಂತ್ರಿಗಳು ವಿತರಿಸಿದರು.

ಸಮಾರಂಭದಲ್ಲಿ ನಗರಾಭಿವೃದ್ಧಿ ಇಲಾಖೆ ಸಂಸದೀಯ ಕಾರ್ಯದರ್ಶಿ ಡಾ.ಮಕ್ಬೂಲ್ ಬಾಗವಾನ್, ಕರ್ನಾಟಕ ಸಾಬೂನು ಮತ್ತು ಮಾರ್ಜಕ ನಿಗಮದ ಅಧ್ಯಕ್ಷ ರಾಜು ಆಲಗೂರ, ಜಿಲ್ಲಾ ಪಂಚಾಯತ್ ಅಧ್ಯಕ್ಷೆ ನೀಲಮ್ಮ ಮೇಟಿ, ಉಪಾಧ್ಯಕ್ಷ ಪ್ರಭುಗೌಡ ದೇಸಾಯಿ, ಮಾಜಿ ಶಾಸಕ ಎಂ.ಎಂ.ಸಜ್ಜನ ಇತರರು ಉಪಸ್ಥಿತರಿದ್ದರು.

-----------------